ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(263)

ಶ್ರೀ ಕೆ.ಪ್ರತಾಪ್‌ಚಂದ್ರ ಶೆಟ್ಟಿ (ಕುಂದಾಪುರ):- ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲೋಕಿನಲ್ಲಿ ಪಡಿತರ ಚೀಟಿಯ ವ್ಯವಸ್ಥೆ ಸಮರ್ಪಕವಾಗಿ ವಿತರಣೆಯಾಗದೇ ಇರುವುದರಿಂದ ಬಡವರಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ,

ಆ) ಇದನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಜಿ.ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):- ಇಲ್ಲ. ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಆಲಮಟ್ಟಿ ಯೋಜನೆಯ ಎರಡನೇ ಹಂತದಲ್ಲಿ ಬೀಳಗಿ ಕ್ಷೇತ್ರದಲ್ಲಿ ಸೇತುವೆ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 93(449)

ಶ್ರೀ ಜೆ.ಟಿ.ಪಾಟೀಲ್ (ಬೀಳಗಿ):- ಮಾನ್ಯ ಭಾರಿ ಮತ್ತು ಮಾಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಲಮಟ್ಟಿ ಯೋಜನೆಯ ಎರಡನೇ ಹಂತದಲ್ಲಿ ಬೀಳಗಿ ಮತಕ್ಷೇತ್ರದ ಜಮಖಂಡಿ ತಾಲ್ಲೂಕಿನಲ್ಲಿ ಬರುವ ಚಿಕ್ಕಪಡಸಲಗಿ ಸೇತುವೆ ಸಂಪೂರ್ಣವಾಗಿ ಮುಳುಗಡೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ, ಹೊಸ ಸೇತುವೆ ನಿರ್ಮಿಸಲು ಕೈಗೊಂಡಿರುವ ಕ್ರಮಗಳೇನು?

ಇ) ಈ ಯೋಜನೆಯನ್ನು ಸಿದ್ಧಪಡಿಸಿದರೆ ಅಂದರ ಅಂದಾಜು ವೆಚ್ಚವೆಷ್ಟು?

ಶ್ರೀ ಕೆ.ಎನ್.ನಾಗೇಗೌಡ (ಭಾರಿ ಮತ್ತು ಮಾಧ್ಯಮ ನೀರಾವರಿ ಸಚಿವರು):- ಬಂದಿದೆ. ಚಿಕ್ಕಪಡಸಲಗಿ ಸೇತುವೆಯು ಮಹಾಪೂರ ಬಂದಾಗ ಮತ್ತು ಆಲಮಟ್ಟಿ ಡ್ಯಾಮ್‌ನ ಎತ್ತರ 509.00 ಆದಾಗ ಡ್ಯಾಮಿನ ಹಿನ್ನೀರಿನಲ್ಲಿ ಮುಳುಗಡೆ ಆಗುತ್ತದೆ. ಅದಕ್ಕಾಗಿ ಒಂದು ಹೊಸ ಮೇಲ್ಮಟ್ಟದ ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಮತ್ತು ಸಂಪರ್ಕ ಸಾಧನವಾಗಿ ಒಂದು ಪರ್ಯಾಯ ವ್ಯವಸ್ಥೆ ಇರಲು ಹಾಗೂ ಮೇಲ್ಮಟ್ಟದ ಸೇತುವೆಯ ಅಪ್ರೋಚ್‌ಗಳನ್ನು ಎತ್ತರಿಸುವ ಬಗ್ಗೆ ಸರ್ವೆ ಕೆಲಸ ಮತ್ತು ಅಂದಾಜನ್ನು ಸಿದ್ಧಪಡಿಸಲು ಕ್ರಮ ಕೈಗೊಳ್ಳಲಾಗಿದೆ.

ಚಿಕ್ಕಪಡಸಲಗಿ ಬಳಿ ಹೊಸ ಮೇಲ್ಮಟ್ಟದ ಸೇತುವೆ ನಿರ್ಮಾಣದ ಅಂದಾಜು 23 ಕೋಟಿ ರೂ.ಗಳು ಆಗುವ ನಿರೀಕ್ಷೆ ಇದೆ.

ವಿಷಯ:- ಬಿಜಾಪುರ ಜಿಲ್ಲೆ ಅಂತರ್‌ಜಲ ಅಭಿವೃದ್ಧಿ ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 94(450-ಎ)

ಶ್ರೀ ಜೆ.ಟಿ.ಪಾಟೀಲ (ಬೀಳಗಿ):- ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್‌ಜಲಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ ಅಂತರ್ಜಲ ಅಭಿವೃದ್ಧಿಗೆ ಸರ್ಕಾರದವರು ಕೈಗೊಂಡಿರುವ

ಕ್ರಮಗಳೇನು? ತಾಲ್ಲೂಕುವಾರು ವಿವರ ನೀಡುವುದು.

ಶ್ರೀ ತಿಪ್ಪೆಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲಾಭವೃದ್ಧಿ ಸಚಿವರು):- ಅಂತರ್ಜಲ ಸಮೀಕ್ಷಣೆ ಮತ್ತು ಅನ್ವೇಷಣಾ ವಿಭಾಗವು 1970-71ರ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಸ್ಥಾಪಸಲಾಗಿದ್ದು, ಕರ್ತವ್ಯ ನಿರ್ವಹಿಸುತ್ತಿರುವುದು. ಅಂದಿನಿಂದಲೂ, ಇಲಾಖೆಯು ವ್ಯವಸಾಯವನ್ನು ಅವಲಂಬಿಸಿಸುವ ರೈತರಿಗೆ ಕೃಷಿ ಅಭಿವೃದ್ಧಿ ಪಡಿಸುವ ಸಲುವಾಗಿ ಅಂತರ್ಜಲ ಹೊ/ದಲು ತೋಡು ಬಾವಿ: ಕೊಳವೆ ಬಾವಿಗಳನ್ನು ನಿರ್ಮಿಸಲು ಸ್ಥಳಾಯ್ಕೆಯ ತಾಂತ್ರಿಕ ಸಲಹಾ ಕಾರ್ಯಕ್ರಮವನ್ನು ಚಟುವಟಿಕೆಯಿಂದ ಮಾಡುತ್ತಿದೆ. ಇಲಾಖೆಯು ಅಂತರ್ಜಲ ಸಮೀಕ್ಷಣಾ ಕಾರ್ಯವನ್ನು ಎಲ್ಲಾ ತಾಲ್ಲೂಕುಗಳಲ್ಲಿ ಕೈಗೊಂಡಿದ್ದು ಅದರ ವರದಿಯನ್ನು ಅವಶ್ಯಕತೆ ಇದ್ದಾಗಲೆಲ್ಲಾ ಹೊರತರುತ್ತಿದೆ. ಇತ್ತೀಚೆಗೆ, ಅಂದರೆ 31-12-1994ರಂತೆ ಇಲಾಖೆಯು ರಾಜ್ಯದ ಅಂತರ್ಜಲ ಸ್ಥಿತಿಗಳ ಬಗ್ಗೆ ವರದಿ ಮಾಡಿದೆ. ಈ ಅಧ್ಯಯನದ ಪ್ರಕಾರ ಜಿಲ್ಲೆಯ ಮೂರು ತಾಲ್ಲೂಕುಗಳಲ್ಲಿ ಅಂತರ್ಜಲ ಬಳಕೆ ಅತಿಯಾಗಿರುವುದು ಕಂಡು ಬಂದಿದ್ದು ಅಂತರ್ಜಲದ ಮಟ್ಟ ತೀರ ಇಳಿಮುಖವಾಗಿದೆ. ಉಳಿದ ಎಂಟು ತಾಲ್ಲೂಕುಗಳಲ್ಲಿ ಅಂತರ್ಜಲ ಬಳಕೆಯು ಶೇಕಡ 32 ರಿಂದ 61 ರವರೆಗೂ ಇರುತ್ತದೆ. ಅಂತರ್ಜಲ ಮಟ್ಟ ಇಳಿಮುಖವಾಗಿರುವ ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ಸುಧಾರಿಸಲು ಕೃತಕ ಮರುಪೂರೈಕೆಯ ರಚನೆ ಗುರುತಿಸಿ ನಿರ್ಮಾಣದ ಕಾರ್ಯಕ್ರಮವನ್ನು ಕೆಗೊಳ್ಳಲಾಗಿದೆ.

ವಿಷಯ:- ಬೀಳಗಿ ತಾಲ್ಲೊಕಿನ ಲಿಂಗಾಪುರ ಏತ ನೀರಾವರಿ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:95(450)

ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆ ಬೀಳಗಿ ತಾಲ್ಲೂಕಿನ ಲಿಂಗಾಪುರ ಏತ ನೀರಾವರಿ ಯೋಜನೆ ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇಲ್ಲಿಯವರೆಗೆ ಈ ಯೋಜನೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ? ಈಗ ಈ ಯೋಜನೆಗಳು ಅಂದಾಜು ವೆಚ್ಚ ಎಷ್ಟಾಗಬಹುದು?

ಇ) ಹಾಗಿದ್ದಲ್ಲಿ ಯೋಜನೆಯನ್ನು ಯಾವಾಗ ಮುಗಿಸಲಾಗುವುದು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಸಚಿವರು):- ಬಂದಿದೆ. ಇಲ್ಲಿಯವರೆಗೆ 0.41 ಲಕ್ಷ ರೂ.ಗಳು ಖರ್ಚಾಗಿದೆ. ಈಗ ಅದರ ಪರಿಷ್ಕೃತ ಅಂದಾಜು ವೆಚ್ಚ ರೂ. 129.336 ಲಕ್ಷ ಆಗಬಹುದು.

1996-97ನೇ ಸಾಲಿನಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಶ್ರೀ ತಿಪ್ಪೇ ಸ್ವಾಮಿ,
(ಸಣ್ಣ ನೀರಾವರಿ ಮತ್ತು ಅಂತರ್ಜಲ ಸಚಿವರು)

ವಿಷಯ:- ಪೋಲಿಸ್ ಇಲಾಖೆಯ ಸಿಬ್ಬಂದಿ

ಚುಕ್ಕೆ ಗುರುತಿಲ್ಲ ಪ್ರಶ್ನೆ ಸಂಖ್ಯೆ 96(452)